5. ಶಾಸನ ರಚನೆ

ವಿಧೇಯಕಗಳ ಮಂಡನೆ

1. ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕ, 2004.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಮುಖ್ಯ ಮಂತ್ರಿಗಳ ಪರವಾಗಿ) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ನ್ಯಾಯ ವರದಿಗಳ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ.

"2004ರ ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾಪ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್.ಕೆ. ಪಾಟೀಲ್ (ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವರು): ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ನ್ಯಾಯವಾದಿಗಳ ಕಲ್ಯಾಣ ನಿಧಿ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ–2)

2. ಕರ್ನಾಟಕ ಭೂ ಸ್ವಾಧೀನ (ತಿದ್ದುಪಡಿ) ವಿಧೇಯಕ, 2004.

ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು): ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಭೂ ಸ್ವಾಧೀನ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು, ತಮ್ಮ ಅನುಮತಿ ಕೋರುತ್ತೇನೆ."

ಅಧ್ಯಕ್ಷರು : ಪ್ರಸ್ತಾವ ಏನೆಂದರೆ,

"2004ರ ಕರ್ನಾಟಕ ಭೂ ಸ್ವಾಧೀನ (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು"

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಎಂ.ಪಿ. ಪ್ರಕಾಶ್ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, "2004ರ ಕರ್ನಾಟಕ ಭೂ ಸ್ವಾಧೀನ (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ. (ಅನುಬಂಧ–3)